# ಹೆಬ್ಬಾಳ ಸ್ಟೀಲ್ ಫ್ಲೈಓವರ್ ನಿರ್ಮಾಣದ ಪ್ರಸ್ತಾಪವನ್ನು ಮರುಪರೀಶೀಲನೆ ಮಾಡುವ ಕುರಿತು ಉಪ ಮುಖ್ಯಮಂತ್ರಿರವರ ನಿರ್ಧಾರದ ಬಗ್ಗೆ ಮಾನ್ಯ ಸಂಸದರಾದ ರಾಜೀವ್ ಚಂದ್ರಶೇಖರ್ ರವರ ಹೇಳಿಕೆ

---

## ಮಾಧ್ಯಮ ಪ್ರಕಟಣೆ

ಚುನಾವಣೆಗಳು ಸಮೀಪಿಸುತ್ತಿದ್ದಂತೆಯೇ ಸ್ಟೀಲ್-ಫ್ಲೈಓವರ್ ನಂತಹ ಯೋಜನೆಗಳು ನಿಗೂಢ ರೀತಿಯಲ್ಲಿ ಮರುಜೀವ ಪಡೆದುಕೊಳ್ಳುತ್ತವೆ. ಬೆಂಗಳೂರು ಕಾಂಗ್ರೆಸ್ ಸರ್ಕಾರದ 5 ವರ್ಷಗಳ ದುರಾಡಳಿತವನ್ನು ನೋಡಿದೆ. ಈಗ ಸಮ್ಮಿಶ್ರ ಸರ್ಕಾರದ ಅವಧಿಯಲ್ಲೂ ಸಹ ಬಿಲ್ಡರ್ - ಕಂಟ್ರಾಕ್ಟರ್ ಗಳ ಮೂಲಕ ನಗರದ ಶೋಷಣೆ, ಸಾರ್ವಜನಿಕ ಹಣದ ದುರ್ಬಳಕೆ, ಭ್ರಷ್ಟಾಚಾರ ಮುಂದುವರೆದಿದೆ. ಕೆಜೆ ಜಾರ್ಜ್ ರವರ ಸೂಕ್ತ ಉತ್ತರಾಧಿಕಾರಿಯಂತಿರುವ ಪ್ರಭಾವಿ ಸಚಿವ ಡಿಕೆ ಶಿವಕುಮಾರ್ ಸ್ಟೀಲ್ ಫ್ಲೈಓವರ್ ನ ನಿರ್ಮಾಣದ ಮೇಲೆ ಆಸಕ್ತಿಯನ್ನು ತೋರಿಸಿರುವುದು ಅಚ್ಚರಿಯೇನಲ್ಲ.

ಅಧಿಕಾರದಲ್ಲಿದ್ದ 5 ವರ್ಷಗಳಲ್ಲಿ ಬೆಂಗಳೂರಿನ ಸಾರಿಗೆ ಸಮಸ್ಯೆಗಳನ್ನು ಬಗೆಹರಿಸಲು ಕಾಂಗ್ರೆಸ್ ಪಕ್ಷ ತೋರಿದ ಒಲವು ಮತ್ತು ಆಸಕ್ತಿ ಎಲ್ಲರಿಗೂ ತಿಳಿದಿರುವಂತಹದ್ದೇ! ನಾಗರೀಕರಿಗೆ ಪ್ರಯೋಜನವಿಲ್ಲದ ಮತ್ತು ಕಾಂಟ್ರಾಕ್ಟರ್ ಗಳು ಹಾಗೂ ಬಿಲ್ಡರ್ ಗಳಿಗೆ ಉಪಯೋಗವಾಗುಂತಹ ಯೋಜನೆಗಳನ್ನು ನೀಡಲು ಹೆಸರುವಾಸಿಯಾಗಿರುವ ಬಿಡಿಎ ಪ್ರಸ್ತಾಪಿಸಿರುವ ಉಕ್ಕಿನ ಫ್ಲೈಓವರ್ ಮೇಲೆ ಸರ್ಕಾರ ಹೆಚ್ಚಿನ ಆಸಕ್ತಿ ತೋರುತ್ತಿದೆ. ಈ ರೀತಿಯ ದುಬಾರಿ ಮತ್ತು ಪ್ರಯೋಜನವಿಲ್ಲದ ಯೋಜನೆಗಳನ್ನು ನೀಡುವಲ್ಲಿ ಬಿಡಿಎ ತನ್ನದೇ ಆದ ಇತಿಹಾಸವನ್ನೇ ಹೊಂದಿದೆ.

ಸ್ಟೀಲ್ ಫ್ಲೈ ಒವರ್ ಮೇಲೆ ವಿಶೇಷ ಆಸಕ್ತಿ ತೋರುತ್ತಿರುವ ಕಾಂಗ್ರೆಸ್ ನಾಯಕರಿಗೆ ನಾನು ಹೇಳ ಬಯಸುವುದೇನೆಂದರೆ, ಈ ಹಿಂದೆಯೂ ಸ್ಟೀಲ್ ಫ್ಲೈ ಒವರ್ ಯೋಜನೆ ಪ್ರಸ್ತಾಪ ಬಂದಿದ್ದಾಗ ಅದನ್ನು ನಾಗರೀಕರು ತೀವ್ರವಾಗಿ ವಿರೋಧಿಸಿದ್ದರು. ಅಷ್ಟೇ ಅಲ್ಲದೆ ಮಾನ್ಯ ರಾಷ್ಟ್ರೀಯ ಹಸಿರು ಪೀಠ ಸಹ ಈ ಯೋಜನೆಗೆ ತಡೆಯೊಡ್ಡಿತ್ತು. ಇದು ರಾಜಕೀಯ ಕೆಸರೆರಚಾಟ ನಡೆಸುವ ವಿಷಯವಲ್ಲ. ಇದು ಬೆಂಗಳೂರಿನ ನಾಗರೀಕರು ಮತ್ತು ಅವರ ಹಕ್ಕುಗಳ ವಿಷಯ. ಈ ದುಬಾರಿ ಯೋಜನೆಯನ್ನು ಜಾರಿಗೆ ತರಲು ಮಾನ್ಯ ಉಪಮುಖ್ಯಮಂತ್ರಿಗಳಾದ ಪರಮೇಶ್ವರರವರು ಮತ್ತು ಸಚಿವರಾದ ಡಿ.ಕೆ ಶಿವಕುಮಾರ್ ರವರು ಸಾರ್ವಜನಿಕರ ದಿಕ್ಕು ತಪ್ಪಿಸಲು ಯಾವುದೇ ಪ್ರಯತ್ನ ನಡೆಸಿದರೂ, ಎಂಪಿಸಿ ನೇತೃತ್ವದಲ್ಲಿ ಬೆಂಗಳೂರಿನ ಅಭಿವೃದ್ಧಿಗೆ ರೂಪಿಸಿದ ಸಮಗ್ರ ಯೋಜನೆಯ ಹೊರತಾದ ಯಾವುದೇ ಯೋಜನೆಯನ್ನು ಜಾರಿಗೆ ತರಲು ಅವಕಾಶ ನೀಡುವುದಿಲ್ಲ. ಸುಮಾರು 1.2 ಕೋಟಿ ಜನಸಂಖ್ಯೆ ಇರುವ ಬೆಂಗಳೂರು ನಗರವು ಕೆಲವೇ ಶ್ರೀಮಂತರಿರುವ ವಿ.ಐ.ಪಿ ಪ್ರದೇಶಗಳಿಗೆ ಸೀಮಿತವಾದ ಸ್ಟೀಲ್ ಫ್ಲೈ ಒವರ್ ಮತ್ತು ಟೆಂಡರ್ ಸ್ಯೂರ್ ನಂತಹ ಯೋಜನೆಗಳನ್ನು ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ನೋಡಿದೆ. ಆದರೆ ಪ್ರಾಮಾಣಿಕವಾಗಿ ಆಸ್ತಿ ತೆರಿಗೆ ಪಾವತಿಸುವ ಲಕ್ಷಾಂತರ ಸಾಮಾನ್ಯ ನಾಗರೀಕರು ವಾಸವಿರುವ ಪ್ರದೇಶಗಳು ಇಂದಿಗೂ ರಸ್ತೆ ಮತ್ತು ಇತರ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿವೆ. ಕರ್ನಾಟಕ ಸರ್ಕಾರದ ಬಳಿ ಹಣವಿದ್ದರೆ, ಅದನ್ನು ಸಾರ್ವಜನಿಕ ಒಳಿತಿಗಾಗಿ ಸದುಪಯೋಗ ಪಡಿಸುವ ಮಾರ್ಗಗಳು ಮತ್ತು ಆದ್ಯತೆಗಳ ಕುರಿತು ಮುಕ್ತ ಮತ್ತು ಪಾರದರ್ಶಕ ಚರ್ಚೆಯನ್ನು ನಡೆಸಲಿ.

ನಾನು ಮತ್ತು ಲಕ್ಷಾಂತರ ನಾಗರೀಕರು ಅಂತಹ ಚರ್ಚೆಯಲ್ಲಿ ಸಕ್ರಿಯವಾಗಿ ಭಾಗವಹಿಸಲು ಸಿದ್ಧರಿದ್ದೇವೆ. ಇಲ್ಲವಾದಲ್ಲಿ ಈ ಯೋಜನೆಯನ್ನು ತೀವ್ರವಾಗಿ ವಿರೋಧಿಸಲಾಗುತ್ತದೆ.